ಸಲಹೆ, ಸೂಚನೆಗಳು ಮತ್ತು ಪ್ರೋತ್ಸಾಹದಿಂದ ಕನ್ನಡವನ್ನು ಆಡಳಿತ ಭಾಷೆಯಾಗಿ ಕೊಡುತ್ತೇವೆ ಎನ್ನುವ ಮಾತನ್ನು ನಾನು ತಮ್ಮಲ್ಲಿ ಮತ್ತೊಮ್ಮೆ ಪುನರುಚ್ಚಿಸ ಬಯಸುತ್ತೇನೆ.

ಶ್ರೀ ಆರ್.ವಿ. ದೇಶಪಾಂಡೆ :- ಮಾನ್ಯ ಅಧ್ಯಕ್ಷರೇ, ಮಾನ್ಯ ರಾಮಕೃಷ್ಣ ಹೆಗಡೆಯವರ ಸರಕಾರದಲ್ಲಿ ಕನ್ನಡ ಭಾಷೆಯ ಅನುಷ್ಠಾನದ ಬಗ್ಗೆ ಒಂದು ಪ್ರಮಾಣಿಕವಾದಂಥ ಪ್ರಯತ್ನ ನಡೆಯಿತು. ಪಾಟೀಲ್ ಪುಟ್ಟಪ್ಪನವರು ಕನ್ನಡ ಕಾವಲು ಸಮಿತಿಯ ಅಧ್ಯಕ್ಷರಾಗಿ ಕನ್ನಡ ಭಾಷೆಯು ಸರ್ಕಾರದ ಕಛೇರಿಗಳಲ್ಲಿ, ಕಾರ್ಪೊರೇಷನ್‌ಗಳಲ್ಲಿ, ಮಂಡಳಿಗಳಲ್ಲಿ, ವಿಧಾನಸೌಧದಲ್ಲಿಯೂ ಕೂಡ ಕನ್ನಡವನ್ನು ಅನುಷ್ಠಾನಕ್ಕೆ ತರಲು ಪ್ರಯತ್ನ ಮಾಡಿದರು. ಆ ಪ್ರಯತ್ನ ಕೂಡ ಇವತ್ತು ಕಾಣುತ್ತಾ ಇಲ್ಲ. ಮಾನ್ಯ ಮುಖ್ಯಮಂತ್ರಿಯವರು ಕನ್ನಡವನ್ನು ಏಪ್ರಿಲ್ ಒಂದರಿಂದ ಅನುಷ್ಠಾನಕ್ಕೆ ತರುತ್ತೇವೆ ಎಂದು ಹೇಳುತ್ತಿದ್ದಾರೆ. ಮಾನ್ಯ ಸಚಿವರು ಈ ವರ್ಷದಿಂದ ಶುರು ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಹಾಗಾದರೆ ಸರಕಾರದವರು ಏನು ಕಾರ್ಯಕ್ರಮವನ್ನು ಹಾಕಿಕೊಂಡಿದ್ದಾರೆ, ಅದು ನಮಗೆ ಕಾಣಿಸುತ್ತಾ ಇಲ್ಲ. ಆದರೆ ನಾಡಿನ ಜನತೆಗೆ ಸುಳ್ಳು ಹೇಳಿ ಸುಳ್ಳು ಭರವಸೆಗಳನ್ನು ಕೊಟ್ಟುಕೊಂಡು ಹೋಗುವುದು ಬೇಡ. ರಾಜ್ಯದಲ್ಲಿ ಕನ್ನಡ ಭಾಷೆಯ ಅನುಷ್ಠಾನಕ್ಕೆ ಯಾರ ಅಡ್ಡಿಯೂ ಇಲ್ಲ. ಆದರೆ ಈ ದಿಕ್ಕಿನಲ್ಲಿ ಯಾವ ಪ್ರಯತ್ನಗಳು ಕೂಡ ನಡೆದಿಲ್ಲ ಎಂದು ಹೇಳಬೇಕಾಗುತ್ತದೆ. ಈ ಬಗ್ಗೆ ನಮ್ಮ ಪ್ರತಿಭಟನೆಯನ್ನು ಸೂಚಿಸಿ ಸಭಾತ್ಯಾಗ ಮಾಡುತ್ತೇವೆ.

(ಗೊಂದಲ)

(ಮಾನ್ಯ ವಿರೋಧ ಪಕ್ಷದ ನಾಯಕರು, ಜನತಾ ದಳದ ಸದಸ್ಯರು ಸಭಾತ್ಯಾಗ ಮಾಡಿದರು)

ಶ್ರೀ ಬಿ.ಎಸ್. ಯಡಿಯೂರಪ್ಪ :- ಮಾನ್ಯ ಅಧ್ಯಕ್ಷರೇ ಮಾನ್ಯ ಸಚಿವರು ಕನ್ನಡವನ್ನು ಅನುಷ್ಠಾನಕ್ಕೆ ತರುತ್ತೇವೆಂದು ಮತ್ತು ಅದರ ಬಗ್ಗೆ ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದೇವೆ ಎಂದು ಒಂದು ಭರವಸೆಯನ್ನು ಕೊಟ್ಟಿದ್ದಾರೆ ಆದರೆ ಇವತ್ತು ಸರಕಾರದವರು ನಿರ್ದಿಷ್ಟವಾಗಿ ಯಾವ ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದಾರೆ ಎಂಬ ಬಗ್ಗೆ ಹೇಳಬೇಕಾಗಿದೆ. ನಿರ್ದಿಷ್ಟವಾದ ಯಾವುದೇ ಕಾರ್ಯಕ್ರಮಗಳು ಇಲ್ಲದೇ ಕಳೆದ ಮೂರು ವರ್ಷಗಳಲ್ಲಿ ತಾವುಗಳು ಕೊಟ್ಟಿದ್ದ ಯಾವುದೇ ಭರವಸೆಗಳು ಈಡೇರಲಿಲ್ಲ. ರಾಜ್ಯದ ಜನರಿಗೆ ಭರವಸೆಗಳನ್ನು ಕೊಟ್ಟು ಮರುಳು ಮಾಡುವಂಥ ಈ ರೀತಿಯ ಷಢ್ಯಂತರವು ಸರಿಯಲ್ಲ. ನಮಗೆ ನಂಬಿಕೆಯೂ ಇಲ್ಲ. ಕನ್ನಡದ ನಾಡು ನುಡಿಯ ಬಗ್ಗೆ ಕಳಕಳಿಯೂ ನಿಮ್ಮಲ್ಲಿ ಇಲ್ಲ, ಮತ್ತು ಭರವಸೆಗಳ ಅನುಷ್ಠಾನ ಮಾಡುವ ಶಕ್ತಿಯೂ ಕೂಡ ಈ ಸರಕಾರದಲ್ಲಿ ಇಲ್ಲ, ಹಾಗೂ ಪೊಳ್ಳು ಭರವಸೆಗಳನ್ನು ಕೊಡುವುದು ಬೇಡ ಎಂದು ಹೇಳಿ ಸರಕಾರದ ಧೋರಣೆಯನ್ನು ಪ್ರತಿಭಟಿಸಿ ನಾನು ಮತ್ತು ನನ್ನ ಪಕ್ಷದವರು ಸಭಾತ್ಯಾಗ ಮಾಡುತ್ತೇವೆ. (ಮಾನ್ಯ ಬಿಜೆಪಿಯ ಸದಸ್ಯರುಗಳು ಶ್ರೀ ಬಿ.ಎಸ್. ಯಡಿಯೂರಪ್ಪನವರ ಜೊತೆಗೆ ಸಭಾತ್ಯಾಗ ಮಾಡಿದರು.)

ಅಧ್ಯಕ್ಷರು :- ಮಾನ್ಯ ಎಸ್.ಎಂ. ಯಾಹ್ಯಾರವರು. ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯ ಬಗ್ಗೆ ಪ್ರಸ್ತಾವನೆ ಮಾಡಿ.

ಜಂಟಿ ಪರಿಶೀಲನಾ ಸಮಿತಿಯ ಕಾಲಾವಧಿಯನ್ನು ವಿಸ್ತರಿಸುವುದು.

1992ನೇ ಸಾಲಿನ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ವಿಧೇಯಕ್ಕೆ ಸಂಬಂಧಪಟ್ಟಂತೆ ರಚಿಸಲಾದ ಜಂಟಿ ಪರಿಶೀಲನಾ ಸಮಿತಿಯ ಕಾಲಾವಧಿ ವಿಸ್ತರಣೆ.

ಶ್ರೀ ಎಸ್.ಎಂ. ಯಾಹ್ಯಾ :- (ಉನ್ನತ ಶಿಕ್ಷಣ ಸಚಿವರು) ಮಾನ್ಯ ಅಧ್ಯಕ್ಷರೇ, 1992ನೇ ಸಾಲಿನ ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದ ವಿಧೇಯಕಕ್ಕೆ ಸಂಬಂಧಪಟ್ಟಂತೆ ರಚಿಸಲಾದ ಜಂಟಿ ಪರಿಶೀಲನಾ ಸಮಿತಿಯ ವರದಿಯನ್ನು ಒಪ್ಪಿಸಲು 30ನೇ ಜೂನ್ 1993ರ ವರೆಗೆ ಕಾಲಾವಧಿಯನ್ನು ವಿಸ್ತರಿಸಬೇಕೆಂದು ಕೋರಿಕೊಳ್ಳುತ್ತೇನೆ.